ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಟಿ. ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 660 (716) |
| ಉತ್ತರಿಸಬೇಕಾದ ದಿನಾಂಕ | 11.08.2025 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು. |

********

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಎಷ್ಟು ಕೈಗಾರಿಕಾ ಪ್ರದೇಶಗಳಲ್ಲಿ ಸಿ.ಇ.ಟಿ.ಪಿ. ಕೇಂದ್ರಗಳನ್ನು ತೆರೆಯಲು ಬಾಕಿ ಇದೆ; ಪಿಸಿಬಿ ಕೇಂದ್ರ ತೆರೆಯದಿರಲು ಕಾರಣಗಳೇನು: | ರಾಜ್ಯದಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಅಭಿವೃದ್ಧಿಪಡಿಸಲಾಗಿರುವ ಕೈಗಾರಿಕಾ ಪ್ರದೇಶಗಳಲ್ಲಿ 3 ಸಿ.ಇ.ಟಿ.ಪಿ ಕೇಂದ್ರಗಳು ಚಾಲ್ತಿಯಲಿದ್ದು, ಉಳಿದ ಒಟ್ಟು 13 ಸಿ.ಇ.ಟಿ.ಪಿ ಕೇಂದ್ರಗಳನ್ನು ತೆರೆಯುವ ಪ್ರಸ್ತಾವನೆಯು ಮಂಡಳಿಯಲ್ಲಿ ಬಾಕಿ ಇರುತ್ತದೆ. ಇದರಲ್ಲಿ 2 ಸಿ.ಇ.ಟಿ.ಪಿ ಕೇಂದ್ರಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ. 1 ಸಿ.ಇ.ಟಿ.ಪಿ ಕೇಂದ್ರ ನಿರ್ಮಾಣಕ್ಕೆ ಟೆಂಡರ್ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಮತ್ತು ಉಳಿದ 10 ಸಿ.ಇ.ಟಿ.ಪಿ ಕೇಂದ್ರಗಳನ್ನು ತೆರೆಯುವ ಪ್ರಸ್ತಾವನೆಗಳು ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಪರಿಶೀಲನೆಯಲ್ಲಿರುತ್ತದೆ. |
| ಆ) | ರಾಜ್ಯದ ಎಷ್ಟು ಕೈಗಾರಿಕಾ ಪ್ರದೇಶಗಳಲ್ಲಿ ಸಿ.ಇ.ಟಿ.ಪಿ.ಗಳಿವೆ; ಹಾಗೂ ಅನೇಕ ಕೈಗಾರಿಕಾ ಪ್ರದೇಶಗಳಲ್ಲಿ ಸಿಇಟಿಪಿಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸಿಇಟಿಪಿಗಳಿಲ್ಲದಿರುವುದಕ್ಕೆ ಕಾರಣಗಳೇನು: | ರಾಜ್ಯದಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಅಭಿವೃದ್ಧಿಪಡಿಸಲಾದ ಕೈಗಾರಿಕಾ ಪ್ರದೇಶಗಳಲ್ಲಿ ಚಾಲ್ತಿಯಲ್ಲಿರುವ ಒಟ್ಟು 3 ಸಿ.ಇ.ಟಿ.ಪಿ ಕೇಂದ್ರಗಳಲ್ಲಿ 2 ಕೇಂದ್ರಗಳು ಪೂರ್ಣಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು, 1 ಸಿ.ಇ.ಟಿ.ಪಿ ಕೇಂದ್ರ Tertiary Treatment ವರೆಗೂ ಪೂರ್ಣಗೊಂಡಿದ್ದು, ಕಾರ್ಯಾರಂಭ ಮಾಡಲಾಗಿದೆ.<br><br>ರಾಜ್ಯದಲ್ಲಿ ಅನೇಕ ಕೈಗಾರಿಕಾ ಪ್ರದೇಶಗಳಲ್ಲಿ ಸಿಇಟಿಪಿ ಇಲ್ಲದಿರುವುದಕ್ಕೆ ಸಂಬಂಧಿಸಿದಂತೆ ಮಂಡಳಿಯಿಂದ ಈಗಾಗಲೇ ಕ್ರಮವಹಿಸಲಾಗಿದ್ದು, 3 ಸಿ.ಇ.ಟಿ.ಪಿ ಕೇಂದ್ರಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ. 1 ಸಿ.ಇ.ಟಿ.ಪಿ ಕೇಂದ್ರ ನಿರ್ಮಾಣಕ್ಕೆ ಟೆಂಡರ್ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಮತ್ತು ಉಳಿದ 10 ಸಿ.ಇ.ಟಿ.ಪಿ ಕೇಂದ್ರಗಳನ್ನು ತೆರೆಯುವ ಪ್ರಸ್ತಾವನೆಯು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿರುತ್ತದ. |
| ಇ) | ಪ್ರತಿಯೊಂದುಕೈಗಾರಿಕಾ ಪ್ರದೇಶಗಳಲ್ಲಿ ಸಿಇಟಿಪಿಗಳನ್ನು ಸ್ಥಾಪಿಸಲು ಕೆ.ಎಸ್.ಪಿ.ಸಿ.ಬಿ. ಕೈಗೊಂಡಿರುವ ಕ್ರಮಗಳೇನು: | ಕೈಗಾರಿಕಾ ಪ್ರದೇಶ ಅಭಿವೃದ್ಧಿ ಪಡಿಸುವ ಸಂಸ್ಥೆಗಳಿಗೆ ಅವರದೇ ಪ್ರದೇಶದಲ್ಲಿ ಅವಶ್ಯಕತೆಗೆ ಅನುಗುಣವಾಗಿ ಸಿ.ಇ.ಟಿ.ಪಿ ಗಳನ್ನು ಅಳವಡಿಸುವ ನಿಬಂಧನೆಯೊಂದಿಗೆ ಸಮ್ಮತಿ ಆದೇಶವನ್ನು ನೀಡಲಾಗುತ್ತಿದೆ. |
| ಈ) | ರಾಜ್ಯದ ಕೆಲವು ಕೈಗಾರಿಕಾ ಪ್ರದೇಶಗಳಲ್ಲಿ ಕೆಲವು ಕೈಗಾರಿಕೆಗಳು ಮಾಲಿನಕಾರಕ ತ್ಯಾಜ್ಯಗಳನ್ನು ರಸ್ತೆ ಬದಿ ಮತ್ತು ಹಳ್ಳಗಳಲ್ಲಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ | ರಾಜ್ಯದ ಕೆಲವು ಕೈಗಾರಿಕಾ ಪ್ರದೇಶಗಳಲ್ಲಿ ಕೆಲವು ಕೈಗಾರಿಕೆಗಳು ಮಾಲಿನ್ಯಕಾರಕ ತ್ಯಾಜ್ಯಗಳನ್ನು ರಸ್ತೆ ಬದಿ ಮತ್ತು ಹಳ್ಳಗಳಲ್ಲಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |

| | | |
|---|---|---|
| | ಬಂದಿದೆಯೇ: ಬಂದಿದ್ದಲ್ಲಿ ಇದನ್ನು ತಡೆಗಟ್ಟಲು ಕೆ.ಎಸ್.ಪಿ.ಸಿ.ಬಿ. ಕೈಗೊಂಡಿರುವ ಕ್ರಮಗಳೇನು? | ಪ್ರಾದೇಶಿಕ ಕಛೇರಿ-ದೊಡ್ಡಬಳ್ಳಾಪುರ ವ್ಯಾಪ್ತಿಯಲ್ಲಿ ದಿನಾಂಕ: 30.04.2025 ರಂದು ಉದಯವಾಣಿ ದಿನಪತ್ರಿಕೆಯಲ್ಲಿ ಗುಂಡಮಗೆರೆ ಅರಣ್ಯ ಪ್ರದೇಶದಲ್ಲಿ ಕಲುಷಿತ ತ್ಯಾಜ್ಯ ನೀರನ್ನು ಸುರಿದಿರುವ ಬಗ್ಗೆ ವರದಿ ಮಾಡಿದ್ದು, ಪ್ರಾದೇಶಿಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿವೀಕ್ಷಣೆ ಸಮಯದಲ್ಲಿ ಸದರಿ ಪ್ರದೇಶದಲ್ಲಿ ಕಲುಷಿತ ತ್ಯಾಜ್ಯ ನೀರು ಸುರಿದಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದು. ಇದು ಟ್ಯಾಂಕರ್‌ಗಳಿಂದ ಸುರಿದಿರುವ ಬಗ್ಗೆ ದೃಢಪಟ್ಟಿರುತ್ತದೆ.<br><br>ಪ್ರಾದೇಶಿಕ ಕಛೇರಿ-ದೊಡ್ಡಬಳ್ಳಾಪುರ ವ್ಯಾಪ್ತಿಯಲ್ಲಿ ದಿನಾಂಕ: 17.05.2025ರಂದು ಪ್ರಜಾವಾಣಿ ದಿನಪತ್ರಿಕೆಯಲ್ಲಿ ಗುಂಡಮಗೆರೆ ಅರಣ್ಯ ಪ್ರದೇಶದಲ್ಲಿ ಕಲುಷಿತ ತ್ಯಾಜ್ಯ ನೀರನ್ನು ಟ್ಯಾಂಕರ್‌ಗಳಿಂದ ಸುರಿಯುತ್ತಿರುವ ಬಗ್ಗೆ ವರದಿ ಮಾಡಿದ ಹಿನ್ನೆಲೆಯಲ್ಲಿ ಪ್ರಾದೇಶಿಕ ಅಧಿಕಾರಿಗಳು ತಹಶೀಲ್ದಾರ್ ಅರಣ್ಯ ಪೋಲೀಸ್ ಮತ್ತು ಪಂಚಾಯಿತಿ ಅಧಿಕಾರಿಗಳ ಸಮ್ಮುಖದಲ್ಲಿ ಭೇಟಿ ನೀಡಿದಾಗ ಕಲುಷಿತ ತ್ಯಾಜ್ಯ ನೀರು ಸುರಿಯುತ್ತಿರುವುದುದೃಢಪಟ್ಟಿರುತ್ತದೆ.<br><br>ಇದರನ್ವಯ ಅರಣ್ಯ ಪ್ರದೇಶದ ದಾರಿಯಲ್ಲಿ ಹಾದುಹೋಗುವ ಟ್ಯಾಂಕರ್‌ಗಳ ಮೇಲೆ ನಿಗವಹಿಸಲು ಅರಣ್ಯ ಇಲಾಖೆಯಿಂದ ಚೆಕ್‌ಪೋಸ್ಟನ್ನು ತೆರೆಯಲು ಹಾಗೂ ಸದರಿ ಪ್ರದೇಶಗಳಲ್ಲಿ ಸಿ.ಸಿ.ಟಿವಿ ಯನ್ನು ಅಳವಡಿಸುವಂತೆ ವಲಯ ಅರಣ್ಯ ಅಧಿಕಾರಿಗಳಿಗೆ ಮತ್ತು ಪೋಲೀಸ್ ಇಲಾಖೆಗೆ ದಿನಾಂಕ: 19.05.2025 ರಂದು ಪ್ರಾದೇಶಿಕ ಕಛೇರಿ ಅಧಿಕಾರಿಗಳು ಪತ್ರ ಬರೆದಿರುತ್ತಾರೆ.<br><br>ಪ್ರಾದೇಶಿಕ ಕಛೇರಿ ಬಳ್ಳಾರಿ ವ್ಯಾಪ್ತಿಯಲ್ಲಿ ಪರಿವೀಕ್ಷಣೆ ಸಮಯದಲ್ಲಿ, 4ನೇ ಹಂತದ ಮುಂಡರಗಿ ಕೈಗಾರಿಕಾ ಪ್ರದೇಶದಲ್ಲಿ ಜೀನ್ಸ್ ಘಟಕಗಳಿಂದ ಉತ್ಪತ್ತಿಯಾಗುವ ತ್ಯಾಜ್ಯ ನೀರನ್ನು ಸಂಸ್ಕರಿಸದೆ ನೇರವಾಗಿ ಮುಂಡರಗಿ ಹಳ್ಳಕ್ಕೆ ಬೀಳುತ್ತಿರುವುದು ಕಂಡುಬಂದಿರುವುದರಿಂದ, ಮಂಡಳಿಯಿಂದ ಈಗಾಗಲೇ 16 ಜೀನ್ಸ್ ಘಟಕಗಳಿಗೆ ಮುಚ್ಚುವ ಆದೇಶವನ್ನು ನೀಡಲಾಗಿರುತ್ತದೆ.<br><br>ಪ್ರಾದೇಶಿಕ ಕಛೇರಿ, ಯಾದಗಿರಿ ವ್ಯಾಪ್ತಿಯಲ್ಲಿ ದಿ:30.07.2025 ರಂದು ಯಾದಗಿರಿ ತಾಲ್ಲೂಕಿನ ಕಿಲ್ಲನಕೇರಾ ಗ್ರಾಮದ ಗಡಿಬಾ ಹಳ್ಳದ ಹತ್ತಿರ ಕೈಗಾರಿಕಾ ತ್ಯಾಜ್ಯ ನೀರು ಅನಧಿಕೃತವಾಗಿ ವಿಲೇವಾರಿ ಮಾಡಿರುತ್ತಾರೆ. ಸದರಿ ವಿಷಯವಾಗಿ ಪ್ರಾದೇಶಿಕ ಕಛೇರಿಯಿಂದ ದಿ:01.08.2025ರಂದು ಸೈದಾಪೂರ, ಪೊಲೀಸ್‌ಠಾಣೆಗೆ ದೂರು ನೀಡಲಾಗಿದ್ದು ಪೊಲೀಸ್ ಠಾಣೆಯಲ್ಲಿ ಪ್ರಥಮ ಮಾಹಿತಿ ವರದಿ (FIR) ದಾಖಲಾಗಿದ್ದು ಇದು ವಿಚಾರಣಾ ಹಂತದಲ್ಲಿರುತ್ತದೆ.<br><br>ಯಾದಗಿರಿ ತಾಲ್ಲೂಕಿನ ಕಡೇಚೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ರಾಜನಹಳ್ಳಿ, ಶೆಟ್ಟಿಹಳ್ಳಿ ಮತ್ತು ಕಡೇಚೂರು ಗ್ರಾಮದ ರಾಷ್ಟ್ರೀಯ ಹೆದ್ದಾರಿ 150ರ |

| | | |
|---|---|---|
| | | ಪಕ್ಕದಲ್ಲಿ ಕೆಮಿಕಲ್ ತ್ಯಾಜ್ಯವನ್ನು ಅನಧಿಕೃತವಾಗಿ ವಿಲೇವಾರಿ ಮಾಡುತ್ತಿರುವ ಬಗ್ಗೆ ಪ್ರಾದೇಶಿಕ ಕಛೇರಿಗೆ ದಿ:03.08.2025 ರಂದು ಗಮನಕ್ಕೆ ಬಂದಿದ್ದು, ಸದರಿ ತ್ಯಾಜ್ಯದ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಿದ್ದು, ಸದರಿ ಜಾಗದಲ್ಲಿರುವ ತ್ಯಾಜ್ಯವನ್ನು ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ ಹಾಗೂ ಇದು ವಿಚಾರಣಾ ಹಂತದಲ್ಲಿರುತ್ತದೆ. |

ಸಂಖ್ಯೆ: ಅಪಜೀ 261 ಇಪಿಸಿ 2025.

(ಈಶ್ವರ ಬಿ.ಖಂಡ್ರೆ)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು.